# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 474 (548) |
| ಮಾನ್ಯ ಸದಸ್ಯರ ಹೆಸರು | ಡಾ: ವೈ.ಎ. ನಾರಾಯಣಸ್ವಾಮಿ<br>(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 16/09/2021 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿ ಯಾವಾಗಿನಿಂದ ಸ್ಥಾಪಿತಗೊಂಡಿದೆ; | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ 1996 ಮತ್ತು ಕರ್ನಾಟಕ ನಿಯಮಗಳು 2006ರಡಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ದಿನಾಂಕ:18-01-2007 ರಂದು ಸ್ಥಾಪನೆಗೊಂಡಿರುತ್ತದೆ. ಸದರಿ ದಿನದಿಂದಲೇ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಸುಂಕ ಕಾಯ್ದೆ 1996 ಮತ್ತು ಕೇಂದ್ರ ನಿಯಮಗಳು 1998 ರನ್ವಯ ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿ ಸ್ಥಾಪನೆಗೊಂಡಿರುತ್ತದೆ. |
| ಆ) | ಹಾಗಿದ್ದಲ್ಲಿ, ಈ ಯೋಜನೆಗೆ ಎಷ್ಟು ಹಣ ಮೀಸಲಿಡಲಾಗಿದೆ; | ಸರ್ಕಾರದಿಂದ ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಗೆ ಯಾವುದೇ ಹಣ ಮೀಸಲಿಟ್ಟಿರುವುದಿಲ್ಲ. ಅದಾಗ್ಯೂ ಮೇಲಿನ ಕಾಯ್ದೆ ಮತ್ತು ನಿಯಮಗಳನುಸಾರ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳ ಅಂದಾಜು ವೆಚ್ಚದಲ್ಲಿ ಶೇ.1ರಷ್ಟನ್ನು ಕಲ್ಯಾಣ ಸುಂಕವಾಗಿ ಸಂಗ್ರಹಿಸಲಾಗುತ್ತಿದೆ. |
| ಇ) | ಈ ಕಟ್ಟಡ ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರ ರೂಪಿಸಿರುವ ಯೋಜನೆಗಳೇನು; (ವಿವರಗಳನ್ನು ನೀಡುವುದು) | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಮತ್ತು ಅವರ ಅವಲಂಬಿತರಿಗೆ 19 ರೀತಿಯ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ನೀಡಲಾಗುತ್ತಿದ್ದು ವಿವರಗಳನ್ನು **ಅನುಬಂಧ-1**ರಲ್ಲಿ ಲಗತ್ತಿಸಿದೆ. |
| ಈ) | ರಾಜ್ಯದಲ್ಲಿ ಎಷ್ಟು ಕಟ್ಟಡ ಕಾರ್ಮಿಕರನ್ನು ನೋಂದಾಯಿಸಲಾಗಿದೆ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು) | ಇಲ್ಲಿಯವರೆಗೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕೆಲಸ ಮಾಡುವ 30,39,459 ಕಾರ್ಮಿಕರನ್ನು ಫಲಾನುಭವಿಗಳನ್ನಾಗಿ ನೋಂದಾಯಿಸಿಕೊಳ್ಳಲಾಗಿರುತ್ತದೆ. (ಜಿಲ್ಲಾವಾರು ಮಾಹಿತಿಯ ವಿವರವನ್ನು **ಅನುಬಂಧ-2** ರಲ್ಲಿ ಲಗತ್ತಿಸಿದೆ. |

| | | |
|---|---|---|
| ಉ) | ನೋಂದಣಿ ಪ್ರಕ್ರಿಯೆಗೆ ಇರುವ ಮಾನದಂಡಗಳೇನು? (ವಿವರಗಳನ್ನು ನೀಡುವುದು) | **ಕಟ್ಟಡ ಕಾರ್ಮಿಕರು ಮಂಡಳಿಗೆ ಸದಸ್ಯರಾಗಲು ಪಾಲಿಸಬೇಕಾದ ನಿಯಮಗಳು:-**<br>1. ನಮೂನೆ 5(1) ರಲ್ಲಿ ಆನ್‌ಲೈನ್‌ನಲ್ಲಿ ಅರ್ಜಿಯೊಂದಿಗೆ ಈ ಕೆಳಕಂಡ ದಾಖಲೆಗಳನ್ನು ಕಾರ್ಯವ್ಯಾಪ್ತಿಯ ಕಾರ್ಮಿಕ ನಿರೀಕ್ಷಕರಿಗೆ ಸಲ್ಲಿಸಬೇಕು.<br>ಅ. ಉದ್ಯೋಗ ದೃಢೀಕರಣ ಪತ್ರ/ ಸ್ವಯಂ ದೃಢೀಕರಣ ಪತ್ರ.<br>ಆ. ಮೂರು ಪಾಸ್ ಪೋರ್ಟ್ ಅಳತೆಯ ಭಾವಚಿತ್ರ.<br>ಇ. ವಯಸ್ಸಿನ ದಾಖಲೆ ಪತ್ರ.<br>ಈ. ಅರ್ಜಿದಾರರ ಹಾಗೂ ಅವನ ಅವಲಂಬಿತರ ಆಧಾರ್ ಕಾರ್ಡ್ ಮತ್ತು ಬ್ಯಾಂಕ್ ಖಾತೆಯ ಪಾಸ್‌ಬುಕ್ ಪ್ರತಿ<br>ಉ. ಕಳೆದ 1 ವರ್ಷದಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕನಿಷ್ಠ 90 ದಿನಗಳು ಕೆಲಸ ನಿರ್ವಹಿಸಿರಬೇಕು.<br>ಊ. ವಯೋಮಿತಿ 18 ರಿಂದ 60 ವರ್ಷದೊಳಗಿರಬೇಕು. |

**ಕಾಇ 379 ಎಲ್‌ಇಟಿ 2021**

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು

# ಅನುಬಂಧ-01

## ಮಂಡಳಿಯ ವತಿಯಿಂದ ನೋಂದಾಯಿತ ಫಲಾನುಭವಿಗಳಿಗೆ ಸಿಗುವ ಸೌಲಭ್ಯಗಳು

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆಮಾಸಿಕ ರೂ.2,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ ರೂ.1000/-
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃಅಂಗವಿಕಲತೆ ಹೊಂದಿದ್ದರೆ ಮಾಸಿಕ ರೂ.2,000/- ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ ರೂ.2,00,000/- ದವರೆಗೆಅನುಗ್ರಹ ರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ( ಈಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. **ಟ್ರೈನಿಂಗ್-ಕಮ್-ಟೂಲ್‌ಕಿಟ್‌ಸೌಲಭ್ಯ (ಶ್ರಮ ಸಾಮರ್ಥ್ಯ)** : ರೂ.30,000/- ವರೆಗೆ
6. **ಶ್ರಮ ಸಂಸಾರ ಸಾಮರ್ಥ್ಯತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯಅವಲಂಭಿತರಿಗೆ( ಈಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ):** ರೂ.2,00,000/- ದವರೆಗೆ ಮುಂಗಡ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆರೂ. 30,000/- ಮತ್ತುಗಂಡು ಮಗುವಿನ ಜನನಕ್ಕೆರೂ.20,000/-
9. **ಶಿಶು ಪಾಲನಾ ಸೌಲಭ್ಯ:**
10. **ಅಂತ್ಯಕ್ರಿಯೆವೆಚ್ಚ**:ರೂ.4,000/- ಹಾಗೂ ಅನುಗ್ರಹ ರಾಶಿ ರೂ.50,000/-ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ):** ಫಲಾನುಭವಿಯಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

| ಕ್ರ.ಸಂ. | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ (ವರ್ಷ 3 ರಿಂದ 5) | 5,000 |
| 2 | 1 ರಿಂದ 4ನೇ ತರಗತಿ | 5,000 |
| 3 | 5 ರಿಂದ 8ನೇ ತರಗತಿ | 8,000 |
| 4 | 9 ಹಾಗೂ 10ನೇ ತರಗತಿ | 12,000 |
| | ಪದವಿ ಪೂರ್ವ | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯಪಿ.ಯು.ಸಿ | 15,000 |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 20,000 |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್ ಪಾರಮೆಡಿಕಲ್‌ಕೋರ್ಸ್ | 40,000 |
| 8 | ಡಿ.ಎಡ್ | 25,000 |
| | ಬಿ.ಎಡ್ | 35,000 |
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 25,000 |
| 10 | ಎಲ್‌ಎಲ್‌ಬಿ / ಎಲ್‌ಎಲ್‌ಎಮ್ | 30,000 |
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 35,000 ಗರಿಷ್ಠ 2 ವರ್ಷಅವಧಿಗೆ ಒಳಪಟ್ಟು |

| ತಾಂತ್ರೀಕ/ ವೈದ್ಯಕೀಯಎನ್‌ಇಇಟಿಅಥವಾ ಕೆಸಿಇಟಿ | | |
|---|---|---|
| 12 | ಬಿಇ / ಬಿ.ಟೆಕ್‌ಅಥವಾ ಸಂಬಂಧಪಟ್ಟಯೂಜಿಕೋರ್ಸ್ | ಸದರಿ ಕೋರ್ಸ್‌ನಗರಿಷ್ಠ 2 ವರ್ಷಅವಧಿಗೆ ಒಳಪಟ್ಟು ವಾರ್ಷಿಕ ರೂ.50,000 |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರಕೋರ್ಸ್) | ಸದರಿ ಕೋರ್ಸ್‌ನಗರಿಷ್ಠ ಅವಧಿಗೆ ಒಳಪಟ್ಟು ವಾರ್ಷಿಕರೂ. 60,000 |
| 14 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್‌ಎಸ್ / ಬಿಡಿಎಸ್ /ಬಿಹೆಚ್‌ಎಮ್‌ಎಸ್‌ಕೋರ್ಸ್‌ಗೆಅಥವಾಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರಕೋರ್ಸ್ | ರೂ.60,000 (ಸದರಿ ಕೋರ್ಸ್‌ನಗರಿಷ್ಠ ಅವಧಿಗೆ ಒಳಪಟ್ಟು ) |
| | ಎಮ್‌ಡಿ | ರೂ. 75,000 (ಸದರಿ ಕೋರ್ಸ್‌ನಗರಿಷ್ಠ ಅವಧಿಗೆ ಒಳಪಟ್ಟು) |
| 15 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆಗರಿಷ್ಠ ಮೂರು ವರ್ಷಗಳಗೆ ಹಾಗೂ ಎಮ್‌ಫಿಲ್‌ಗೆ 1 ವರ್ಷಕ್ಕೆ ಪ್ರತಿ ವರ್ಷ ರೂ. 25,000 (ಯೂಜಿಸಿಯ ಜೂನಿಯರ್‌ರಿಸರ್ಚ್ ಫೆಲೋಶಿಫ್‌ಗೆ ಆಯ್ಕೆಯಾಗಿರುವ ಅಭ್ಯರ್ಥಿಗಳು ಕೇಂದ್ರ ಮತ್ತು ರಾಜ್ಯ ಸರ್ಕಾರದಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾ ಯೂಜಿಸಿ ನಿಯಮಗಳನ್ವಯ ವೇತನ ಅನುದಾನಕ್ಕೆ ಒಳಪಡುವ ಹು ಅನುದಾನಿತ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ. |
| 16 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ ಎಐಐಎಮ್‌ಎಸ್ /ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | ಪಾವತಿಸಿದ ಬೋಧನಾ ಶುಲ್ಕ |

12. **ವೈದ್ಯಕೀಯ ಸಹಾಯಧನ (ಕಾರ್ಮಿಕಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರಅವಲಂಬಿತರಿಗೆರೂ.300/- ರಿಂದರೂ.10,000/-ವರೆಗೆ

13. **ಅಪಘಾತ ಪರಿಹಾರ:** ಮರಣ ಹೊಂದಿದ್ದಲ್ಲಿರೂ.5,00,000/-, ಸಂಪೂರ್ಣ ಶಾಶ್ವತದುರ್ಬಲತೆಯಾದಲ್ಲಿ ರೂ.2,00,000/- ಮತ್ತುಭಾಗಶಃ ಶಾಶ್ವತದುರ್ಬಲತೆಯಾದಲ್ಲಿ ರೂ.1,00,000/-

14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದತೊಂದರೆಗೆ ಸಂಬಂಧಿತಚಿಕಿತ್ಸೆ, ಮೂತ್ರ ಪಿಂಡದಲ್ಲಿನಕಲ್ಲುತೆಗೆಯುವಚಿಕಿತ್ಸೆ, ಮೆದುಳಿನ ರಕ್ತಸ್ರಾವದಚಿಕಿತ್ಸೆ, ಅಲ್ಸರ್‌ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್‌ಚಿಕಿತ್ಸೆ, ಇತರೆಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ ರೂ.2,00,000/-ವರೆಗೆ

15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾಅವರಇಬ್ಬರು ಮಕ್ಕಳ ಮದುವೆಗೆತಲಾ ರೂ.50,000/-

16. **LPG ಸಂಪರ್ಕ ಸೌಲಭ್ಯ (ಕಾರ್ಮಿಕ ಅನಿಲ ಭಾಗ್ಯ):** ಅನಿಲ ಸಂಪರ್ಕದೊಂದಿಗೆಎರಡು ಬರ್ನರ್ ಸ್ಟೌವ್

17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ:** ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತ'ಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತಕಟ್ಟಡಕಾರ್ಮಿಕರಿಗೆ

18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ:** ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿತೊಡಗಿರುವ ನೋಂದಾಯಿತಕಾರ್ಮಿಕರಇಬ್ಬರು ಮಕ್ಕಳಿಗೆ ( ಈಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)

19. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕರೂ.6,000/- ಗಳ ಸಹಾಯಧನ.

# ಅನುಬಂಧ-02

**ಜಿಲ್ಲಾವಾರು ನೋಂದಾಯಿತಕಟ್ಟಡ ಮತ್ತುಇತರೆ ನಿರ್ಮಾಣಕಾರ್ಮಿಕರ ವಿವರ ದಿನಾಂಕ 30-07-2021 ರವರೆಗೆ**

| ಕ್ರ.ಸಂ | ಜಿಲ್ಲೆಯ ಹೆಸರು | ಒಟ್ಟು |
|---|---|---|
| 1 | ಬಾಗಲಕೋಟೆ | 76867 |
| 2 | ಬೆಳಗಾಂ | 128764 |
| 3 | ಬೆಂಗಳೂರು | 598326 |
| 5 | ಬಳ್ಳಾರಿ | 97658 |
| 6 | ಬೀದರ್ | 214634 |
| 7 | ಬಿಜಾಪುರ | 82432 |
| 8 | ಚಾಮರಾಜನಗರ | 41763 |
| 9 | ಚಿಕ್ಕಬಳ್ಳಾಪುರ | 31609 |
| 10 | ಚಿಕ್ಕಮಗಳೂರು | 70283 |
| 11 | ಚಿತ್ರದುರ್ಗ | 94364 |
| 12 | ದಕ್ಷಿಣಕನ್ನಡ | 79271 |
| 13 | ದಾವಣಗೆರೆ | 136178 |
| 14 | ಧಾರವಾಡ | 99407 |
| 15 | ಗದಗ | 49241 |
| 16 | ಕಲಬುರಗಿ | 207168 |
| 17 | ಹಾಸನ | 66995 |
| 18 | ಹಾವೇರಿ | 142016 |
| 19 | ಕೊಡಗು | 5244 |
| 20 | ಕೋಲಾರ | 107514 |
| 21 | ಕೊಪ್ಪಳ | 82131 |
| 22 | ಮಂಡ್ಯ | 45134 |
| 23 | ಮೈಸೂರು | 96709 |
| 24 | ರಾಯಚೂರು | 54052 |
| 25 | ರಾಮನಗರ | 36894 |
| 26 | ಶಿವಮೊಗ್ಗ | 120952 |
| 27 | ತುಮಕೂರು | 70513 |
| 28 | ಉಡುಪಿ | 48358 |
| 29 | ಉತ್ತರಕನ್ನಡ | 81076 |
| 30 | ಯಾದಗಿರಿ | 73906 |
| | ಒಟ್ಟು | **30,39,459** |